# APRIL 13, 2025
# AKASHAVANI - DHARWAD
# PRADESH SAAMACHARA (KANNADA) 7.05 A.M

<><><>

**ಮುಖ್ಯಾಂಶಗಳು**

- ಹುಬ್ಬಳ್ಳಿ– ಧಾರವಾಡ ನಡುವೆ ಪ್ರಾಯೋಗಿಕವಾಗಿ ವಿದ್ಯುತ್ ಚಾಲಿತ ಕ್ಷಿಪ್ರ ಸಾರಿಗೆ ಯೋಜನೆಗೆ ಒಪ್ಪಂದ.
- ಪ್ರಸಕ್ತ ವರ್ಷದಿಂದ ದಸರಾ ಕ್ರೀಡಾಕೂಟದಲ್ಲಿ ಕಂಬಳ ಕ್ರೀಡೆ ಸೇರ್ಪಡೆ – ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್.
- ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿಯಲ್ಲಿ ಪಂಪ ಭವನ ನಿರ್ಮಾಣ – ಸಚಿವ ಶಿವರಾಜ ತಂಗಡಗಿ
- ಕಡಲ ನಡುವೆ ಅಪಾಯಕ್ಕೆ ಸಿಲುಕುವ ಮೀನುಗಾರರಿಗೆ ಸೀ ಆ್ಯಂಬುಲೆನ್ಸ್ ವ್ಯವಸ್ಥೆ ಸಹಕಾರಿ – ಸಚಿವ ಮಂಕಾಳ ಎಸ್ ವೈದ್ಯ.

**ಈಗ ವಾರ್ತೆಗಳ ವಿವರ**

ಹುಬ್ಬಳ್ಳಿ– ಧಾರವಾಡ ಅವಳಿ ನಗರಗಳ ನಡುವೆ ವಿದ್ಯುತ್ ಚಾಲಿತ ಕ್ಷಿಪ್ರ ಸಾರಿಗೆ ಯೋಜನೆ ಯೋಜನೆ ಜಾರಿ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿಯವರ ಅಧಿಕೃತ ನಿವಾಸ ಕಾವೇರಿಯಲ್ಲಿ ಸಭೆ ನಡೆಸಿ, ಸಾಧಕ– ಭಾದಕಗಳ ಕುರಿತು ಚರ್ಚಿಸಲಾಯಿತು. ಉದ್ದೇಶಿತ ಯೋಜನೆಯ ಸಾಧ್ಯತೆಯ ಕುರಿತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ್ ಲಾಡ್ ಸಭೆಯಲ್ಲಿ ವಿವರಿಸಿದರು. ಹುಬ್ಬಳ್ಳಿ–ಧಾರವಾಡ ನಡುವೆ ವಿದ್ಯುತ್ ಚಾಲಿತ ಕ್ಷಿಪ್ರ ಸಾರಿಗೆ ಯೋಜನೆ ಆರಂಭಿಸುವ ಕುರಿತು ವಿವಿಧ ಸಂಸ್ಥೆಗಳೊಂದಿಗೆ ಪರಸ್ಪರ ಒಡಂಬಡಿಕೆಗೆ ಸರ್ಕಾರ ಸಹಿ ಹಾಕಿದೆ. ಯೋಜನೆ ಅನು ್ಠಾನ ಕುರಿತು ಮೂರು ತಿಂಗಳ ಒಳಗಾಗಿ ವಿವರವಾದ ಯೋಜನಾ ವರದಿ ಸಿದ್ಧಪಡಿಸಲು ಮುಖ್ಯಮಂತ್ರಿ ಸೂಚಿಸಿದ್ದಾರೆ. ಇದು ಸಂಪೂರ್ಣ ವಿದ್ಯುತ್ ಚಾಲಿತ ವ್ಯವಸ್ಥೆಯಾಗಿದ್ದು ನಗರದಲ್ಲಿ ಎತ್ತರಿಸಿದ ರಸ್ತೆ ಹಾಗೂ ಇತರೆಡೆ ನೆಲದ ಮೇಲೆ ಸಂಚರಿಸಲಿದೆ. ಇದರಲ್ಲಿ ಒಂದೇ ಬಾರಿ 250 ಜನರು ಪ್ರಯಾಣಿಸಬಹುದಾಗಿದೆ. ಕಳೆದ ಒಂದು ವ ್ದಿಂದ ಯೋಜನೆ ಕಾರ್ಯ ಸಾಧ್ಯತೆ ಬಗ್ಗೆ ಅಧ್ಯಯನ ನಡೆಸಲಾಗಿದೆ. ಮೆಟ್ರೊ ಮಾದರಿಯ ಈ ಸಂಚಾರ ವ್ಯವಸ್ಥೆ ಯುರೋಪಿನ ಹಲವು ರಾಷ್ಟ್ರಗಳಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಕಂಪನಿಗಳ ಪ್ರತಿನಿಧಿಗಳು ಮಾಹಿತಿ ನೀಡಿದರು. ಹುಬ್ಬಳ್ಳಿ ಧಾರವಾಡದಲ್ಲಿ ಈ ಯೋಜನೆ ಯಶಸ್ವಿಯಾದರೆ, ರಾಜ್ಯದ ಇತರ ಎರಡನೇ ಹಂತದ ನಗರಗಳಿಗೂ ಇದನ್ನು ವಿಸ್ತರಿಸಬಹುದಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

<><><>

ಪ್ರಸಕ್ತ ವರ್ಷದಿಂದ ದಸರಾ ಕ್ರೀಡಾಕೂಟದಲ್ಲಿ ಕಂಬಳವನ್ನು ಸೇರಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದ್ದಾರೆ. ಮಂಗಳೂರು ಸಮೀಪದ ಮೂಳೂರು ಅಡ್ಡೂರು ಜೋಡುಕೆರೆ ಕಂಬಳ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು., ಕಂಬಳವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯಲು ಸಹಕಾರ ನೀಡಲಾಗುವುದು. ಬೆಂಗಳೂರಿನಲ್ಲಿಯೂ ಕಂಬಳ ನಡೆದಿದೆ. ಕಂಬಳ ಕ್ರೀಡೆಗೆ ಶಾಶ್ವತ ಪ್ರೋತ್ಸಾಹ ನೀಡಲು ಸರ್ಕಾರ ನಿರ್ಧರಿಸಿದೆ. ಜನಪದ ಸಂಸ್ಕೃತಿ ಉಳಿಸಲು ಸರ್ಕಾರ ಸದಾ ನೆರವು ನೀಡಲಿದೆ ಎಂದರು. ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಇತಿಹಾಸ ಶ್ರೀಮಂತವಾಗಿದೆ. ಧಾರ್ಮಿಕವಾಗಿ ಹಲವಾರು ಪುಣ್ಯಕ್ಷೇತ್ರಗಳಿವೆ. ಅತಿ ಹೆಚ್ಚು ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿವೆ. ಇದಕ್ಕೆ ಪೂರಕವಾಗಿ ಕರಾವಳಿಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಶೀಘ್ರವೇ ಪ್ರವಾಸೋದ್ಯಮ ಸಚಿವರೊಂದಿಗೆ ಚರ್ಚಿಸಿ ಹೊಸ ನೀತಿ ರೂಪಿಸಲಾಗುವುದು ಎಂದು ತಿಳಿಸಿದರು.

<><><>

ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿಯಲ್ಲಿ ಪಂಪನ ನೆನಪಿನಲ್ಲಿ ಪಂಪ ಭವನ ನಿರ್ಮಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ಶಿರಸಿ ತಾಲೂಕಿನ ಬನವಾಸಿಯಲ್ಲಿ ನಡೆದ ಕದಂಬೋತ್ಸವ–2025, ಪ್ರತಿಷ್ಠಿತ ಪಂಪ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯ ಜಾತಿ ತಾನೊಂದೆ ವಲಂ ಎಂದ ಕನ್ನಡದ ಆದಿ ಕವಿ ಪಂಪನ ನೆನಪಿನಲ್ಲಿ ಬನವಾಸಿಯಲ್ಲಿ ಪಂಪ ಭವನ ನಿರ್ಮಿಸುವ ಕುರಿತು ಜಿಲ್ಲಾಡಳಿತದ ಮೂಲಕ ಪ್ರಸ್ತಾವ ಸಲ್ಲಿಸಿದಲ್ಲಿ ಈ ಬಗ್ಗೆ ಖಂಡಿತವಾಗಿ ಕ್ರಮ ಕೈಗೊಳ್ಳಲಾಗುವುದು ಎಂದರು. ಬನವಾಸಿಯಲ್ಲಿ ಪಂಪ ವನ ಅಭಿವೃದ್ಧಿಗಾಗಿ 50 ಲಕ್ಷ ಅನುದಾನ ಈಗಾಗಲೇ ಬಿಡುಗಡೆ ಮಾಡಲಾಗಿದೆ. ಕದಂಬ ಉತ್ಸವಕ್ಕೆ ಪ್ರತಿ ವರ್ಷ 2 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗುತ್ತಿದ್ದು, ಜಿಲ್ಲೆಯ ಕರಾವಳಿ ಉತ್ಸವಕ್ಕೆ 5 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗುವುದು ಎಂದರು. ರಾಜ್ಯದ ಆಡಳಿತದಲ್ಲಿ ಕದಂಬರ ಜನೋಪಯೋಗಿ ಆಡಳಿತ ವ್ಯವಸ್ಥೆ ಅಳವಡಿಸಿಕೊಳ್ಳಲಾಗಿದೆ. ಕಲೆ ಸಾಹಿತ್ಯ ಸಂಸ್ಕತಿಯ ಬೆಳವಣಿಗೆಗೆ ಸರ್ಕಾರ ಸದಾ ಪ್ರೋತ್ಸಾಹ ನೀಡುತ್ತಿದ್ದು, ಜನೋಪಯೋಗಿ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ ಎಂದರು.

<><><>

ಕಡಲ ನಡುವೆ ಅಪಾಯಕ್ಕೆ ಸಿಲುಕುವ ಮೀನುಗಾರರಿಗೆ ಅನುಕೂಲವಾಗುವಂತೆ ಸೀ ಆಂಬುಲೆನ್ಸ್ ವ್ಯವಸ್ಥೆಯನ್ನು ಶೀಘ್ರದಲ್ಲೇ ಕಾರ್ಯಗತಗೊಳಿಸಲಾಗುವುದು ಎಂದು ಮೀನುಗಾರಿಕಾ ಸಚಿವ ಮಂಕಾಳ ಎಸ್ ವೈದ್ಯ ತಿಳಿಸಿದ್ದಾರೆ. ಮಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೀನುಗಾರಿಕೆಗೆ ತೆರಳುವ ಮೀನುಗಾರರು ತುರ್ತು ಅವಘಡಕ್ಕೊಳಗಾದಾಗ ಮತ್ತು ಅನಾರೋಗ್ಯಕ್ಕೀಡಾದಾಗ ತಕ್ಷಣ ಸ್ಪಂದಿಸಲು ಸೀ ಆಂಬ್ಯುಲೆನ್ಸ್ ವ್ಯವಸ್ಥೆ ಸಹಕಾರಿಯಾಗಲಿದೆ. ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಆಗಸ್ಟ್ ತಿಂಗಳ ಅಂತ್ಯದೊಳಗೆ ಕಾರ್ಯಗತಗೊಳಿಸಲಾಗುವುದು ಎಂದರು.

<><><>

ಕರಾವಳಿ ಭಾಗದ ಮಂಗಳೂರು ಜಂಕ್ಷನ್ ರೈಲ್ವೇ ನಿಲ್ದಾಣದ ಅಭಿವೃದ್ಧಿ ಕಾರ್ಯ 19 ಕೋಟಿ ರೂಪಾಯಿ ವೆಚ್ಚದಲ್ಲಿ ನಡೆಯುತ್ತಿದ್ದು, ಈಗಾಗಲೇ ಶೇಕಡಾ 85ರ ಷ್ಟ ಕಾಮಗಾರಿ ಪೂರ್ಣಗೊಂಡಿದೆ. ಆಗಸ್ಟ್ ತಿಂಗಳೊಳಗೆ ಸಂಪೂರ್ಣ ಕಾಮಗಾರಿ ಮುಕ್ತಾಯವಾಗಲಿದೆ ಎಂದು ಕೇಂದ್ರ ರೈಲ್ವೇ ಇಲಾಖೆಯ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಗಳೂರು ಸೆಂಟ್ರಲ್ ರೈಲು ನಿಲ್ದಾಣವನ್ನು ವಿಶ್ವದರ್ಜೆಗೇರಿಸುವ ಮಾಸ್ಟರ್ ಪ್ಲಾನ್ ಸಿದ್ಧಗೊಂಡಿದ್ದು, ಟೆಂಡರ್ ಕರೆದು ಎರಡು ವ ರ್ಷಗಳಲ್ಲಿ ಲೋಕಾರ್ಪಣೆಗೊಳಿಸುವ ಗುರಿ ಹೊಂದಲಾಗಿದೆ. ಅಲ್ಲದೆ ಮುಂದಿನ ಒಂದೂವರೆ ತಿಂಗಳಲ್ಲಿ ವಂದೇ ಭಾರತ್ ಸ್ಲೀಪಿಂಗ್ ಕೋಚ್ ಬರಲಿದ್ದು, ಈ ಪೈಕಿ ಒಂದನ್ನು ಮಂಗಳೂರಿಗೆ ನೀಡಲಾಗುವುದು ಎಂದು ಹೇಳಿದರು.
ಮಂಗಳೂರು ರೈಲ್ವೇ ವಿಭಾಗ ಸದ್ಯ ಮೂರು ರೈಲ್ವೇ ವಿಭಾಗದಡಿ ಕಾರ್ಯ ನಿರ್ವಹಿಸುತ್ತಿದ್ದು, ಇದನ್ನು ಒಂದೇ ವಿಭಾಗದ ವ್ಯಾಪ್ತಿಗೆ ಒಳಪಡಿಸಲು ನಿರ್ಧರಿಸಲಾಗಿದೆ ಎಂದು ಸಚಿವರು ತಿಳಿಸಿದರು.

<><><>

<u>ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..</u>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ **x** ಖಾತೆ **@airnews_dharwad** ಹಾಗೂ

ನಮ್ಮ ಫೇಸ್ಬುಕ್ ಖಾತೆ **Airrnu Dharwad** ಅನುಸರಿಸಿ.

<><><>

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯ, ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅಧ್ಯಯನ ವಿಭಾಗ, ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿ ಪ್ರಯುಕ್ತ, ಇಂದು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸುವರ್ಣ ಮಹೋತ್ಸವ ಭವನದಲ್ಲಿ, ಪರಿಶಿಷ್ಟ ಸಮುದಾಯದ ಪದವಿ ಕಾಲೇಜು ವಿದ್ಯಾರ್ಥಿಗಳ ಸಮಾವೇಶ ಆಯೋಜಿಸಿದೆ. ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯ ಡಾಕ್ಟರ್ ಎಂ.ಬಿ.ಹೆಗ್ಗಣ್ಣವರ ಇಂದು ಬೆಳಗ್ಗೆ ಸಮಾವೇಶ ಉದ್ಘಾಟಿಸಲಿದ್ದಾರೆ. ಸಂಜೆ, ನಡೆಯುವ ಭೀಮೋತ್ಸವ ಸಾಂಸ್ಕೃತಿಕ ಕಾರ್ಯಕ್ರಮವನ್ನು ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಉದ್ಘಾಟಿಸಲಿದ್ದಾರೆ.

<><><>

ವಿಧಾನಪರಿಷತ್ ಮಾಜಿ ಸದಸ್ಯ ಡಿ.ಮಾದೇಗೌಡ ಅವರ ಅಭಿನಂದನಾ ಗ್ರಂಥ ಲೋಕಾರ್ಪಣೆ ಮತ್ತು ಉಘೇ ಮಾದೇಗೌಡ್ರು ಅಭಿನಂದನಾ ಸಮಾರಂಭವು, ಇಂದು ಸಂಜೆ 4 ಗಂಟೆಗೆ, ಮೈಸೂರಿನ ಕಲಾಮಂದಿರದಲ್ಲಿ ನಡೆಯಲಿದೆ. ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡರ್ ರುಸಮಾರಂಭ ಉದ್ಘಾಟಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನಾ ಗ್ರಂಥ ಬಿಡುಗಡೆ ಮಾಡಲಿದ್ದಾರೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಡಿ.ಮಾದೇಗೌಡ ಅಭಿನಂದನಾ ಸಮಿತಿ ಸದಸ್ಯರಾದ ಬಸವರಾಜ ಹಟ್ಟಿಗೌಡರ.

<><><>

ಬಸವರಾಜ ಹಟ್ಟಿಗೌಡರ ಧ್ವನಿ – 58 ಸೆಕೆಂದುಗಳು

<><><>

ಚಿಕ್ಕ ವಯಸ್ಸಿನಲ್ಲಿಯೇ ಸಕಲ ಸುಖವನ್ನು ತ್ಯಜಿಸಿ, ಚೆನ್ನಮಲ್ಲಿಕಾರ್ಜುನನ್ನು ತನ್ನ ಪತಿಯೆಂದು ಸ್ವೀಕರಿಸಿ, ಲೌಖಿಕ ಜಗತ್ತನ್ನು ಧಿಕ್ಕರಿಸಿ, ವಚನ ಸಾಹಿತ್ಯದಲ್ಲಿ ಗುರುತಿಸಿಕೊಂಡು ಅಕ್ಕಮಹಾದೇವಿ ಮಾದರಿಯಾಗಿದ್ದಾಳೆ ಎಂದು ಧಾರವಾಡ ರಂಗಾಯಣ ನಿರ್ದೇಶಕ  ಡಾಕ್ಟರ್ ರಾಜು ತಾಳಿಕೋಟಿ ಹೇಳಿದ್ದಾರೆ. ಧಾರವಾಡ ರಂಗಾಯಣವು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿವಿಧ ಟ್ರಸ್ಟ್‌ಗಳ ಸಹಯೋಗದಲ್ಲಿ "ನಮ್ಮ ಸಂವಿಧಾನ ನಮ್ಮ ಕಲರವ" ಧ್ಯೇಯವಾಕ್ಯದಡಿ ಚಿಣ್ಣರಮೇಳದಲ್ಲಿ ಆಯೋಜಿಸಿದ್ದ, ಅಕ್ಕಮಹಾದೇವಿ ಜಯಂತಿ ಹಾಗೂ ಹನುಮಾನ್ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸ್ತ್ರೀವಾದಿ ಚಳುವಳಿಯ ಪ್ರತಿಪಾದಕಿಯಾಗಿ ಪ್ರಮುಖ ಸ್ಥಾನವನ್ನು ಪಡೆದು ಹಲವಾರು ವಚನಗಳನ್ನು ಕೊಡುಗೆಯಾಗಿ ನೀಡಿದ್ದಾರೆ. ಅಕ್ಕಮಹಾದೇವಿಯು ಅಂದಿನ ಕಾಲದಲ್ಲಿ ತೋರಿದ ದಿಟ್ಟತನ, ಶ್ರದ್ಧೆ, ವೈಚಾರಿಕ ಮನೋಭಾವನೆ ಇಂದಿನ ಸಮಾಜಕ್ಕೂ ಮಾದರಿಯಾಗಬೇಕು ಎಂದು ಮಕ್ಕಳಿಗೆ ಅಕ್ಕಮಹಾದೇವಿ ಕುರಿತು ತಿಳಿಸಿದರು. ಈ ಸಂದರ್ಭದಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕುಮಾರ ಬೆಕ್ಕೇರಿ, ಶಿಬಿರದ ನಿರ್ದೇಶಕ ಲಕ್ಷ್ಮಣ ಪೀರಗಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಯುವ ಗಾಯಕ ರಾಘವ ಕಮ್ಮಾರ ಅವರ ಮಾರ್ಗದರ್ಶನದಲ್ಲಿ ಅಕ್ಕಮಹಾದೇವಿ ಅವರ ವಚನವನ್ನು ಮಕ್ಕಳು ಪ್ರಸ್ತುತಪಡಿಸಿದರು.

<><><>

<u>ಈಗ ಸಂಕ್ಷಿಪ್ತ ಸುದ್ದಿಗಳು</u>

ಮಹಿಳೆಯರು ಪೊಲೀಸ್ ಠಾಣೆಗೆ ತೆರಳಲು ಭಯ ಪಡಬಾರದು ಹಾಗೂ ಮಹಿಳೆಯರ ರಕ್ಷಣೆಗಾಗಿಯೇ ಪೊಲೀಸ್ ಠಾಣೆ ಇರುವುದು ಎಂದು ತಿಳಿದುಕೊಳ್ಳಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌದರಿ ತಿಳಿಸಿದ್ದಾರೆ. ಮೈಸೂರಿನ ಮಹಾರಾಣಿ ಕಲಾ ಕಾಲೇಜಿನಲ್ಲಿ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಹಾವೇರಿ ಜಿಲ್ಲೆ ಸವಣೂರು ತಾಲೂಕಿನ ಕಾರಡಗಿ ಶ್ರೀ ವೀರಭದ್ರೇಶ್ವರ ರಥೋತ್ಸವದ ಹಿನ್ನೆಲೆ, ಇಂದು ಸಂಜೆ ಕಡಬಿನ ಕಾಳಗ ಹಾಗೂ ಪಲ್ಲಕ್ಕಿ ಸೇವೆ ಜರುಗುವುದು.

<><><>